
UASB LIBRARY
Newspaper Clippings

Pg .1 Tuesday 06-07-2021 **Jai Kisan**



ಕೃಷಿ ವಿಶ್ವವಿದ್ಯಾಲಯದಿಂದ ರೈತ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಬೆಂಗಳೂರು ಕೃಷಿ ವಿಶ್ವವಿದ್ಯಾಲಯವು ಈ ಸಾಲಿನ ರಾಜ್ಯ, ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದ 'ಅತ್ಯುತ್ತಮ ರೈತ ಪ್ರಶಸ್ತಿ' ಹಾಗೂ 'ರೈತ ಮಹಿಳೆ ಪ್ರಶಸ್ತಿ'ಗಳಿಗೆ ಅರ್ಜಿಗಳನ್ನು ಆಹ್ವಾನಿಸಿದೆ.

ರಾಜ್ಯಮಟ್ಟದಲ್ಲಿ ಎಚ್. ಡಿ.ದೇವೇಗೌಡ ಅತ್ಯುತ್ತಮ ರೈತ-ರೈತ ಮಹಿಳೆ ಪ್ರಶಸ್ತಿ, ಎಂ.ಎಚ್. ಮರಿಗೌಡ ಅತ್ಯುತ್ತಮ ತೋಟಗಾರಿಕಾ ರೈತ ಪ್ರಶಸ್ತಿ, ಆರ್.ದ್ವಾರಕಿನಾಥ್ ಅತ್ಯುತ್ತಮ ರೈತ ಹಾಗೂ ವಿಸ್ತರಣಾ ಕಾರ್ಯಕರ್ತ ಪ್ರಶಸ್ತಿ, ಕ್ಯಾನ್‌ಬ್ಯಾಂಕ್ ರೈತ ಹಾಗೂ ರೈತ ಮಹಿಳಾ ಪ್ರಶಸ್ತಿಗಳನ್ನು ನೀಡಲಾಗುವುದು.

ಜಿಲ್ಲಾಮಟ್ಟದಲ್ಲಿ ಅತ್ಯುತ್ತಮ ರೈತ ಹಾಗೂ ರೈತ ಮಹಿಳೆ, ತಾಲ್ಲೂಕು ಮಟ್ಟದಲ್ಲಿ ಯುವ ರೈತ ಹಾಗೂ ಯುವ ರೈತ ಮಹಿಳೆ ಪ್ರಶಸ್ತಿಗಳನ್ನು ನೀಡಲಾಗುವುದು. ಈ ಅಕ್ಟೋಬರ್‌ನಲ್ಲಿ ನಡೆಯಲಿರುವ ಕೃಷಿ ಮೇಳದಲ್ಲಿ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುವುದು.

ಆಸಕ್ತರು ಅರ್ಜಿ ನಮೂನೆಗಳನ್ನು ಆಯಾ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರ ಕಚೇರಿಗಳು, ಕೃಷಿ ವಿಜ್ಞಾನ ಕೇಂದ್ರಗಳು ಅಥವಾ ವಿಶ್ವವಿದ್ಯಾಲಯದ ವೆಬ್‌ಸೈಟ್ www.uasbangalore.edu.inನಿಂದಲೂ ಪಡೆದುಕೊಳ್ಳಬಹುದು. ಅರ್ಜಿ ಸಲ್ಲಿಸಲು ಜುಲೈ 31 ಕೊನೆಯ ದಿನ ಎಂದು ಪ್ರಕಟಣೆ ತಿಳಿಸಿದೆ.

ವಿಳಾಸ: ಕೃಷಿ ವಿಸ್ತರಣಾ ನಿರ್ದೇಶಕರ ಕಚೇರಿ, ಗಾಂಧಿ ಕೃಷಿ ವಿಜ್ಞಾನ ಕೇಂದ್ರ (ಜಿಕೆವಿಕೆ), ಬೆಂಗಳೂರು ಕೃಷಿ ವಿಶ್ವವಿದ್ಯಾಲಯ.
ಸಂಪರ್ಕ: 080-23330153

06-07-2021 Pv Pg 02

ಕೃಷಿ ವಿವಿ ರೈತ ಪ್ರಶಸ್ತಿಗೆ ಅರ್ಜಿ ಆಹ್ವಾನ

ಬೆಂಗಳೂರು: ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಿಂದ ರಾಜ್ಯ ಜಿಲ್ಲೆ ಹಾಗೂ ತಾಲೂಕು ಮಟ್ಟದ ಪ್ರಶಸ್ತಿ ನೀಡಲು ಆಸಕ್ತ ರೈತ ಹಾಗೂ ರೈತ ಮಹಿಳೆಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಜತೆಗೆ, ಜಿಲ್ಲಾ ಮಟ್ಟದ ಅತ್ಯುತ್ತಮ ರೈತ ಮತ್ತು ಅತ್ಯುತ್ತಮ ರೈತ ಮಹಿಳೆ ಪ್ರಶಸ್ತಿ ಹಾಗೂ ತಾಲೂಕು ಮಟ್ಟದ ಅತ್ಯುತ್ತಮ ಯುವ ರೈತ ಮತ್ತು ಯುವ ರೈತ ಮಹಿಳೆ ಪ್ರಶಸ್ತಿಗೂ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಆಯಾ ಜಿಲ್ಲೆಗಳ ಜಿಲ್ಲೆಗಳ ಜಂಟಿ ಕೃಷಿ ನಿರ್ದೇಶಕರ ಕಚೇರಿ, ವಿಸ್ತರಣಾ ನಿರ್ದೇಶಕರ ಕಚೇರಿ, ಜಿಕೆವಿಕೆ, ಬೆಂಗಳೂರು, ಕೃಷಿ ವಿಜ್ಞಾನ ಕೇಂದ್ರಗಳಾದ ಹಾಡೋನಹಳ್ಳಿ, ಚಂದುರಾಯನಹಳ್ಳಿ, ಕಂದಲಿ, ಕೊನೇಹಳ್ಳಿ, ವಿ.ಸಿ. ಫಾರಂ, ಕುರುಬೂರು ಫಾರಂ ಮತ್ತು ಹರದನಹಳ್ಳಿ ಹಾಗೂ ನಾಗನಹಳ್ಳಿಯ ವಿಸ್ತರಣಾ ಶಿಕ್ಷಣ ಘಟಕದಲ್ಲಿ ನೀಡಲಾಗುತ್ತದೆ. ಬೆಂಗಳೂರು ಕೃಷಿ ವಿವಿ ವೆಬ್‌ಸೈಟ್‌ನಲ್ಲೂ (www.uasbangalore.edu.in) ಅರ್ಜಿ ಲಭ್ಯವಿದೆ. ಭರ್ತಿ ಮಾಡಿದ ಅರ್ಜಿಯನ್ನು 30ರೊಳಗೆ ವಿಸ್ತರಣಾ ನಿರ್ದೇಶಕರ ಕಚೇರಿ, ಕೃಷಿ ವಿಶ್ವವಿದ್ಯಾಲಯ, ಜಿಕೆವಿಕೆ, ಬೆಂಗಳೂರು-65 ವಿಳಾಸಕ್ಕೆ ಕಳುಹಿಸಿ. ವಿವರಕ್ಕೆ ದೂರವಾಣಿ ಸಂಖ್ಯೆ 080-2333 0153 ಸಂಪರ್ಕಿಸಬಹುದು.

» **ಅರ್ಜಿ ಸಲ್ಲಿಕೆಗೆ 30 ಕೊನೇ ದಿನ**

06-07-2021 Vv Pg 03

ಕೃಷಿಕರಿಂದ ಅರ್ಜಿ ಆಹ್ವಾನ

ಬೆಂಗಳೂರು: ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ ತನ್ನ ವ್ಯಾಪ್ತಿಯ 10 ಜಿಲ್ಲೆಗಳ ಆಸಕ್ತ ರೈತ ಹಾಗೂ ರೈತ ಮಹಿಳೆಯರಿಂದ ರಾಜ್ಯ ಮಟ್ಟದ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಪ್ರಶಸ್ತಿಗಳಿಗಾಗಿ ಅರ್ಜಿಯನ್ನು ಆಹ್ವಾನಿಸಲಾಗಿದೆ.

ರಾಜ್ಯ ಮಟ್ಟದ ಪ್ರಶಸ್ತಿಗಳು : ಮಾಜಿ ಪ್ರಧಾನಮಂತ್ರಿ ಶ್ರೀ ಹೆಚ್.ಡಿ. ದೇವೇಗೌಡ ರಾಜ್ಯ ಮಟ್ಟದ ಅತ್ಯುತ್ತಮ ರೈತ / ರೈತ ಮಹಿಳೆ ಪ್ರಶಸ್ತಿ. ಡಾ. ಎಂ.ಹೆಚ್. ಮರಿಗೌಡರಾಜ್ಯ ಮಟ್ಟದ ಅತ್ಯುತ್ತಮ ತೋಟಗಾರಿಕಾ ರೈತ ಪ್ರಶಸ್ತಿ. ಡಾ. ಆರ್. ದ್ವಾರಕೀನಾಥ್ ಅತ್ಯುತ್ತಮ ರೈತ/ರೈತಮಹಿಳೆ ಪ್ರಶಸ್ತಿ. ಡಾ. ಆರ್. ದ್ವಾರಕೀನಾಥ್ ಅತ್ಯುತ್ತಮ ವಿಸ್ತರಣಾ ಕಾರ್ಯಕರ್ತ ಪ್ರಶಸ್ತಿ. ಕೆನರಾ ಬ್ಯಾಂಕ್ ಪ್ರಾಯೋಜಿತ ಕ್ಯಾನ್ ಬ್ಯಾಂಕ್ ಅತ್ಯುತ್ತಮ ರೈತ ಪ್ರಶಸ್ತಿ. ಕೆನರಾ ಬ್ಯಾಂಕ್ ಪ್ರಾಯೋಜಿತ ಕ್ಯಾನ್ ಬ್ಯಾಂಕ್ ಅತ್ಯುತ್ತಮ ರೈತಮಹಿಳೆ ಪ್ರಶಸ್ತಿ.

ಜಿಲ್ಲಾ ಮಟ್ಟದ ಪ್ರಶಸ್ತಿಗಳು : ಜಿಲ್ಲಾ ಮಟ್ಟದ ಅತ್ಯುತ್ತಮ ರೈತ ಪ್ರಶಸ್ತಿ. ಜಿಲ್ಲಾ ಮಟ್ಟದ ಅತ್ಯುತ್ತಮ ರೈತ ಮಹಿಳೆ ಪ್ರಶಸ್ತಿ

ತಾಲ್ಲೂಕು ಮಟ್ಟದ ಪ್ರಶಸ್ತಿಗಳು : ತಾಲ್ಲೂಕು ಮಟ್ಟದ ಅತ್ಯುತ್ತಮ ಯುವ ರೈತ ಪ್ರಶಸ್ತಿ. ತಾಲ್ಲೂಕು ಮಟ್ಟದ ಅತ್ಯುತ್ತಮ ಯುವ ರೈತ ಮಹಿಳೆ ಪ್ರಶಸ್ತಿ. ಈ ಪ್ರಶಸ್ತಿಗಳನ್ನು ಅಕ್ಟೋಬರ್ ತಿಂಗಳಲ್ಲಿ ಏರ್ಪಡಿಸಲಿರುವ ಕೃಷಿ ಮೇಳದಲ್ಲಿ ಪ್ರದಾನ ಮಾಡಲಾಗುತ್ತದೆ. ಭರ್ತಿ ಮಾಡಿದ ಅರ್ಜಿಯನ್ನು ಜುಲೈ 31ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ದೂರವಾಣಿ 080-23330153, ವಿಸ್ತರಣೆ: 401 ಸಂಪರ್ಕಿಸಬಹುದು.

06-07-2021 Sk Pg 07

For more information visit
University Library Website
Web - uasbagrilibindia.org
E-mail- librarian@uasbangalore.edu.in